# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 965(1037) |
| ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 16.12.2025 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು |

******

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಪುರಸಭೆ ಆಯುಕ್ತರು, ಸ್ಥಾಯಿ ಸಮಿತಿಗಳು ಮತ್ತು ಇತರ ಆಡಳಿತ ಸಂಸ್ಥೆಗಳ ಪರಿಣಾಮಕಾರಿ ಕಾರ್ಯನಿರ್ವಹಣೆ ಮತ್ತು ಹೊಣೆಗಾರಿಕೆಯನ್ನು ಸರ್ಕಾರ ಹೇಗೆ ಖಚಿತಪಡಿಸುತ್ತಿದೆ; | ಕರ್ನಾಟಕ ಮುನಿಸಿಪಾಲಿಟಿಗಳ ಅಧಿನಿಯಮ 1964 ರನ್ವಯ ನಗರಸ್ಥಳೀಯ ಸಂಸ್ಥೆಗಳಲ್ಲಿ ಆಡಳಿತವನ್ನು ನಿರ್ವಹಿಸಲಾಗುತ್ತಿದ್ದು, ಪುರಸಭೆ ಮುಖ್ಯಾಧಿಕಾರಿಗಳ ಕರ್ತವ್ಯಗಳನ್ನು ಕರ್ನಾಟಕ ಮುನಿಸಿಪಾಲಿಟಿಗಳ ಅಧಿನಿಯಮ 1964 ರ ಕಲಂ 329 ರಡಿ ಹಾಗೂ ಅಧಿಕಾರಗಳನ್ನು ಕಲಂ 330 ರಡಿ ನಿಗಧಿಪಡಿಸಲಾಗಿರುತ್ತದೆ.<br><br>ಕರ್ನಾಟಕ ಮುನಿಸಿಪಾಲಿಟಿಗಳ ಅಧಿನಿಯಮ 1964 ರ ಕಲಂ 63 ರಡಿ ಸ್ಥಾಯಿಸಮಿತಿಗಳನ್ನು ರಚಿಸಲು ಹಾಗೂ ಕಲಂ 67 ರಡಿ ಸಭೆಗಳಲ್ಲಿನ ಪ್ರಕ್ರಿಯೆ ಕುರಿತು ನಿಯಮಗಳನ್ನು ರಚಿಸಲಾಗಿರುತ್ತದೆ. |
| (ಆ) | ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯ್ತಿ ಆಡಳಿತದಲ್ಲಿ ಮಧ್ಯಪ್ರವೇಶಿಸಲು ಸರ್ಕಾರಕ್ಕಿರುವ ಅಧಿಕಾರಗಳು ಯಾವುವು ಉದಾಹರಣೆಗೆ ಬಾಕಿ ಇರುವ ಸಮಸ್ಯೆಗಳ ಮೇಲೆ ಕ್ರಮ ಕೈಗೊಳ್ಳುವುದು ಅಥವಾ ಸ್ಥಳೀಯ ಸಂಸ್ಥೆಯನ್ನು ವಿಸರ್ಜಿಸುವುದು ಇತ್ಯಾದಿ ಮತ್ತು ಈ ಅಧಿಕಾರವನ್ನು ಹೇಗೆ ಚಲಾಯಿಸುತ್ತದೆ ಎಂಬುದರ ಬಗ್ಗೆ ಮಾಹಿತಿ ನೀಡುವುದು; | • ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರಣಾಂತರಗಳಿಂದ ಕೌನ್ಸಿಲ್ ಚುನಾವಣೆ ನಡೆಸಲು ವಿಳಂಬವಾದ ಪಕ್ಷದಲ್ಲಿ ಸರ್ಕಾರವು ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಕಲಂ 315 ರಡಿ ಆಡಳಿತಾಧಿಕಾರಿಗಳನ್ನು ನೇಮಿಸಿ, ಆಡಳಿತ ನಿರ್ವಹಣೆ ಮಾಡುತ್ತದೆ.<br>• ಸದರಿ ಕಾಯ್ದೆಯ ಕಲಂ 316 ರಡಿ ಕೆಲವು ಸಂದರ್ಭಗಳಲ್ಲಿ ಮುನಿಸಿಪಲ್ ಕೌನ್ಸಿಲ್‌ನ್ನು ವಿಘಟಿಸುವ (Dissolve) ಅಧಿಕಾರವನ್ನು ಸರ್ಕಾರ ಹೊಂದಿರುತ್ತದೆ.<br>• ಸದರಿ ಕಾಯ್ದೆಯ ಕಲಂ 317 ರಡಿ ಮುನಿಸಿಪಲ್ ಕೌನ್ಸಿಲ್‌ಗಳ ನಡುವೆ ವಿವಾದಗಳು ಸೌಹಾರ್ದಯತವಾಗಿ ಬಗೆಹರಿಯದಿದ್ದರೆ ಜಿಲ್ಲೆಯ ಜಿಲ್ಲಾಧಿಕಾರಿ ಅಥವಾ ಪೌರಾಡಳಿತ ನಿರ್ದೇಶಕರು ತೀರ್ಮಾನಿಸುವ ಅಧಿಕಾರವನ್ನು ನಿಗಧಿಪಡಿಸಲಾಗಿದೆ.<br>• ಸದರಿ ಕಾಯ್ದೆಯ ಕಲಂ 319 ರಡಿ ಮುನಿಸಿಪಲ್ ಕೌನ್ಸಿಲ್ ಗಳ ಬೈಲಾಗಳನ್ನು ರದ್ದುಗೊಳಿಸುವ ಅಥವಾ ಮಾರ್ಪಾಟು ಮಾಡಲು ಸರ್ಕಾರ ಅಧಿಕಾರ ಹೊಂದಿರುತ್ತದೆ. |
| (ಇ) | ವಿಕೇಂದ್ರಿಕರಣವನ್ನು ಸುಧಾರಿಸಲು ಮತ್ತು ಸ್ಥಳೀಯ ಸಂಸ್ಥೆಗಳ ಆಡಳಿತದಲ್ಲಿ ಹೆಚ್ಚಿನ ಸಾರ್ವಜನಿಕ ಭಾಗವಹಿಸುವಿಕೆಯನ್ನು ಖಚಿತಪಡಿಸಿಕೊಳ್ಳಲು ಇಲಾಖೆ ಯಾವ ಕ್ರಮಗಳನ್ನು ಜಾರಿಗೆ ತರುತ್ತಿದೆ; | ವಿಕೇಂದ್ರಿಕರಣವನ್ನು ಸುಧಾರಿಸಲು ಮತ್ತು ಸ್ಥಳೀಯ ಸಂಸ್ಥೆಗಳ ಆಡಳಿತದಲ್ಲಿ ಹೆಚ್ಚಿನ ಸಾರ್ವಜನಿಕ ಭಾಗವಹಿಸುವಿಕೆಯನ್ನು ಖಚಿತಪಡಿಸಿಕೊಳ್ಳಲು ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರನಿಯಮ 80 (a) ಯಿಂದ (q) ರಲ್ಲಿ ನೆರೆಹೊರೆ ಗುಂಪು, ಪ್ರದೇಶ ಸಭಾ ಮತ್ತು ವಾರ್ಡ್ ಸಮಿತಿಗಳನ್ನು ರಚಿಸಲು ಹಾಗೂ ಕಾರ್ಯವಿಧಾನದ ಪ್ರಕಾರ್ಯಗಳನ್ನು ನಿಗಧಿಪಡಿಸಲಾಗಿರುತ್ತದೆ. |

| | | |
|---|---|---|
| (ಈ) | ಸ್ಥಳೀಯ ಸಂಸ್ಥೆಗಳ ಕಾರ್ಯನಿರ್ವಹಣೆಯಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಖಚಿತಪಡಿಸಿಕೊಳ್ಳಲು ಯಾವ ಕಾರ್ಯವಿಧಾನಗಳು ಜಾರಿಯಲ್ಲಿವೆ? | ಸ್ಥಳೀಯ ಸಂಸ್ಥೆಗಳ ಕಾರ್ಯನಿರ್ವಹಣೆಯಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಖಚಿತಪಡಿಸಿಕೊಳ್ಳುವ ಕುರಿತು ಕೆಳಕಂಡ ಕಾರ್ಯವಿಧಾನಗಳು ಜಾರಿಯಲ್ಲಿರುತ್ತದೆ.<br>ರಾಜ್ಯದ ನಗರಸ್ಥಳೀಯ ಸಂಸ್ಥೆಗಳಲ್ಲಿ ಇ-ಆಫೀಸ್ ತಂತ್ರಾಂಶವನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತದೆ.<br><br>ರಾಜ್ಯದ ಸ್ಥಳೀಯ ಸಂಸ್ಥೆಗಳಲ್ಲಿ ಸಾರ್ವಜನಿಕರಿಗೆ ನೀಡುವ ಸೇವೆಗಳಿಗೆ ಸಂಬಂಧಿಸಿದಂತೆ ತುರ್ತು ವಿಲೇವಾರಿಗೆ ಸಕಾಲ ದಡಿ ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: UDD/60/LCQ/2025(e)

**(ರಹೀಂ ಖಾನ್)**
**ಪೌರಾಡಳಿತ ಹಾಗೂ ಹಜ್ ಸಚಿವರು**